ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ , ಕುಂದಾಪುರ

ಸಿ.ಸಿ. ನಂಬ್ರ: 529/2017

ಚಾಸಾ: 16 ಪ್ರಾಸಾ:6

ದಿನಾಂಕ: 29.11.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ಮಂಜಪ್ಪ ಡಿ. ಆರ್ |
| ತಂದೆಯ ಹೆಸರು | : | ದುರ್ಗಪ್ಪ |
| ವಯಸ್ಸು | : | 54 ವರ್ಷ |
| ಉದ್ಯೋಗ | : | ಪೊಲೀಸ್ ವೃತ್ತ ನಿರೀಕ್ಷಕರು |
| ವಾಸ ಸ್ಥಳ | : | ಕಾರ್ಕಳ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ: (ವಿ.ಸಿ ಮೂಲಕ)**

ನಾನು 11-10-2016 ರಿಂದ 20-01-2020 ರವರೆಗೆ ಕುಂದಾಪುರ ವೃತ್ತ ನಿರೀಕ್ಷಕರಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿ: 16-12-2016 ರಂದು ಪ್ರಕರಣದ ಕಡತವನ್ನು ಚಾಸಾ-15ರವರಿಂದ ಪಡೆದು ಪರಿಶೀಲಿಸಿರುತ್ತೇನೆ. ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿರುತ್ತೇನೆ. ಈ ಪ್ರಕರಣದ ಪ್ರತ್ಯಕ್ಷದರ್ಶಿಯಾದ ಚಾಸಾ-2 ರವರ ಮರುಹೇಳಿಕೆಯನ್ನು ದಾಖಲಿಸಿರುತ್ತೇನೆ.

ದಿ: 24-12-2016 ರಂದು ಆರೋಪಿ ನ್ಯಾಯಾಲಯದಿಂದ ಜಾಮೀನು ಪಡೆದು ಠಾಣೆಗೆ ಹಾಜರಾಗಿದ್ದು ಆತ ವಾಹನಕ್ಕೆ ಸಂಬಂಧಿಸಿದ ದಾಖಲಾತಿಗಳನ್ನು ಹಾಜರುಪಡಿಸಿದ್ದು, ಅವರಿಗೆ ಕಲಂ 133ರ ನೋಟೀಸು ನೀಡಿ ಉತ್ತರ ಪಡೆದಿರುತ್ತೇನೆ. ಕೆಎಲ್-10-ಎನ್-4837 ವಾಹನದ ಮಾಲೀಕ ಆತನೇ ಆಗಿದ್ದು ನ್ಯಾಯಾಲಯದಿಂದ ಬಿಡುಗಡೆಗೆ ಪಡೆದಿರುತ್ತಾರೆ. ನಂತರ ರಶೀದಿ ಪಡೆದು ವಾಹನವನ್ನು ಬಿಡುಗಡೆ ಮಾಡಿರುತ್ತೇನೆ.

ದಿ: 20-02-2017 ರಂದು ಅಪಘಾತಪಡಿಸಿದ ವಾಹನದ ಐಎಂವಿ ವರದಿ ಮತ್ತು ಮೃತ ಪಟ್ಟ ಗುರುರಾಜ ರವರ ಪಿಎಂ ವರದಿ ಮತ್ತು ಗಾಯದ ಪ್ರಮಾಣ ಪತ್ರಗಳನ್ನು ಸ್ವೀಕರಿಸಿ ಕಡತಕ್ಕೆ ಅಳವಡಿಸಿರುತ್ತೇನೆ.

ಅದೇ ದಿನ ತನಿಖೆ ಪೂರ್ಣಗೊಂಡಿದ್ದರಿಂದ ಆರೋಪಿಯ ವಿರುದ್ದ ದೋಷಾರೋಪಣಾ ಪಟ್ಟಿ ಸಲ್ಲಿಸಿರುತ್ತೇನೆ.

ಸಾಕ್ಷಿಯು ಕಲಂ 133 ಐಎಂವಿ ನೊಟೀಸು, ಉತ್ತರ, ಸ್ವೀಕೃತಿ, ಗಾಯದ ಪ್ರಮಾಣ ಪತ್ರಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ನಿಪಿ-11 ರಿಂದ 14 ಎಂದು, ಸಾಕ್ಷಿಯ ಸಹಿಗಳನ್ನು ನಿಪಿ-11(ಎ) ರಿಂದ 14(ಎ) ಎಂದು ಗುರುತಿಸಲಾಯಿತು. ನಿಪಿ-8 ಮತ್ತು 9ರಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅವುಗಳನ್ನು ನಿಪಿ-8(ಎ) ಮತ್ತು 9(ಎ) ಎಂದು ಗುರುತಿಸಲಾಯಿತು. ಸಾಕ್ಷಿ ನಿಪಿ-4 ಮತ್ತು 5 ರಲ್ಲಿ ವಾಹನವನ್ನು ನೋಡಿ ಗುರುತಿಸಿರುತ್ತಾರೆ. ಸಾಕ್ಷಿ ನ್ಯಾಯಾಲಯದ ಮುಂದೆ ಇರುವ ಆರೋಪಿಯನ್ನು ನೋಡಿ ಗುರುತಿಸಿರುತ್ತಾರೆ.

**<u>ಪಾಟೀ ಸವಾಲುಃ ಆರೋಪಿತರ ಪರ ವಕೀಲರಾದ ಶ್ರೀ ಕೆ ಯು ಎಸ್ ರವರಿಂದಃ</u>**

ನಾನು ಯಾವುದೇ ಸಾಕ್ಷಿದಾರರನ್ನು ವಿಚಾರಿಸಿ ಹೇಳಿಕೆ ಪಡೆದಿಲ್ಲ ಎಂದರೆ ಸರಿಯಲ್ಲ. ಚಾಸಾ-2 ಪ್ರತ್ಯಕ್ಷದರ್ಶಿ. ಸಂಪೂರ್ಣ ವಿಚಾರವನ್ನು ಚಾಸಾ-15 ರವರು ನಡೆಸಿರುತ್ತಾರೆ ಎಂದರೆ ಸರಿ. ನಾನು ಸ್ಥಳ ಪರಿಶೀಲನೆ ಮಾಡಿದಾಗ ವಾಹನ ಅಲ್ಲಿ ಇರಲಿಲ್ಲ. ಅಪಘಾತವಾದ ಬಗ್ಗೆ ಯಾವುದೇ ಕುರುಹುಗಳು ಇರಲಿಲ್ಲ ಎಂದರೆ ಸರಿ. ಕಾರಣ ಪಾದಚಾರಿಗೆ ಅಪಘಾತ ಸಂಭವಿಸಿರುತ್ತದೆ. ಅಪಘಾತವಾದ ದಿನ ನಾನು ಬೇರೆ ಕರ್ತವ್ಯದಲ್ಲಿ ಇದ್ದೆ. ಯಾವುದೇ ಪ್ರತ್ಯಕ್ಷದರ್ಶಿಗಳು ಇಲ್ಲದೆ ಇದ್ದರೂ ವಿಮಾ ಪರಿಹಾರಕ್ಕೆ ಅನುಕೂಲವಾಗುವಂತೆ ಆರೋಪಿ ವಿರುದ್ದ ಸುಳ್ಳು ದೋಷಾರೋಪಣಾ ಪಟ್ಟಿ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ಚಾಸಾ-15 ರವರು ಯಾವುದೇ ಸರಿಯಾದ ತನಿಖೆಯನ್ನು ನಡೆಸಿಲ್ಲ ಎಂದರೆ ಸರಿಯಲ್ಲ. ಇದರಲ್ಲಿ ಆರೋಪಿಯ ಯಾವುದೇ ತಪ್ಪು ಇಲ್ಲ ಎಂದರೆ ಸರಿಯಲ್ಲ. ಸಾಕ್ಷಿದಾರರು ಮೃತರ ಸಂಬಂಧಿಕರಾಗಿದ್ದು, ಪ್ರತ್ಯಕ್ಷದರ್ಶಿಗಳು ಅಲ್ಲ ಎಂದರೆ ಸರಿಯಲ್ಲ. ಆರೋಪಿಯ ಯಾವುದೇ ತಪ್ಪು ಕಂಡು ಬಾರದೆ ಇದ್ದರೂ ಆತನ ವಿರುದ್ದ ಸುಳ್ಳು ಅಂತಿಮ ವರದಿಯನ್ನು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

ಕಲಂ 133 ರ ನೊಟೀಸಿಗೆ ಉತ್ತರವನ್ನು ನಾವೇ ಸೃಷ್ಟಿಸಿ ಆರೋಪಿಯ ಸಹಿ ಪಡೆದಿರುತ್ತೇವೆ ಎಂದರೆ ಸರಿಯಲ್ಲ. ಆತನಿಗೆ ನೊಟೀಸು ನೀಡಿಲ್ಲ ಎಂದರೆ ಸರಿಯಲ್ಲ. ಸದ್ರಿ ದಾಖಲೆಗಳನ್ನು ಆರೋಪಿಯ ವಿರುದ್ದ ಸೃಷ್ಟಿಸಿರುತ್ತೇವೆ ಎಂದರೆ ಸರಿಯಲ್ಲ. ಐಎಂವಿ ವರದಿ ಮತ್ತು ಪಿಎಂ ವರದಿಯನ್ನು ಸ್ವೀಕರಿಸಿಲ್ಲ ಎಂದರೆ ಸರಿಯಲ್ಲ.

**<u>ಮರು ವಿಚಾರಣೆಃ ಇಲ್ಲ.</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ. ದ. ನ್ಯಾ. ದಂ. ಕುಂದಾಪುರ